**Des No**.3916/2026
**Dated** : 28.08.2026

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು-ಮಡಿಕೇರಿ

## ನೇಮಕಾತಿ ಅಧಿಸೂಚನೆ ಸಂಖ್ಯೆ: 03/2026, ದಿನಾಂಕ: 28/08/2026

**ವಿಷಯ** : ಕೊಡಗು ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 06 ಆದೇಶಿಕ ಜಾರಿಕಾರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

**ಉಲ್ಲೇಖ** :
1. ಸರ್ಕಾರಿ ಆದೇಶ ಸಂಖ್ಯೆ. LAW 94 LCE 2018, ಬೆಂಗಳೂರು, ದಿನಾಂಕ 20.08.2019.
2. ಗೌರವಾನ್ವಿತ ಉಚ್ಚ ನ್ಯಾಯಾಲಯದ ಪತ್ರ ಸಂ: DJA/712/2025,ದಿನಾಂಕ 09.02.2026.
3. ಈ ಕಛೇರಿ ನೇಮಕಾತಿ ಅಧಿಸೂಚನೆ ಸಂಖ್ಯೆ 04/2023, ದಿನಾಂಕ 08.11.2023.
4. ಈ ಕಛೇರಿ ಟಿಪ್ಪಣಿ ಮತ್ತು ಆದೇಶ ದಿನಾಂಕ : 28.08.2026.

* * * * *

ಕೊಡಗು ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 06 ಆದೇಶಿಕ ಜಾರಿಕಾರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಜಿ ಸಲ್ಲಿಸುವ ವಿಧಾನ :**

ಮಡಿಕೇರಿ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ : https://kodagu.dcourts.gov.in/online-recruitment/ ರಲ್ಲಿ ನೀಡಲಾಗುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಬೇಕು. ಅಭ್ಯರ್ಥಿಗಳು **ಒಮ್ಮೆ ಮಾತ್ರ ಅರ್ಜಿಯನ್ನು ಸಲ್ಲಿಸತಕ್ಕದ್ದು**. ಒಂದು ವೇಳೆ ಯಾವುದೇ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದಲ್ಲಿ, **ಕೊನೆಯದಾಗಿ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು** ಹಾಗೂ ಉಳಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ/ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಆನ್‌ಲೈನ್ ಹೊರತುಪಡಿಸಿ ಬೇರೆ ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಆನ್‌ಲೈನ್ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ವೇಳಾ ಪಟ್ಟಿಯ ವಿವರ:**

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ : | 03.09.2026 |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : | 03.10.2026<br>ರಾತ್ರಿ 11.59 ರವರೆಗೆ |
| ಅರ್ಜಿ ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ : | 03.10.2026<br>ರಾತ್ರಿ 11.59 ರವರೆಗೆ |

**ವೇತನ ಶ್ರೇಣಿ** : 31775-725-32500-800-35700-900-39300-1000-43300-1125-47800-1250-52800-1375-58300-1500-61300 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

**ಹುದ್ದೆಗಳ ವರ್ಗೀಕರಣ**

| ಪ್ರವರ್ಗ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | **ಒಟ್ಟು** |
|---|---|---|---|---|
| ಸಾಮಾನ್ಯ | 1 | 1 | 1 | 3 |
| ಪರಿಶಿಷ್ಟ ಜಾತಿ | - | 1 | - | 1 |
| 2(ಎ) | - | 1 | - | 1 |
| 2(ಬಿ) | 1 | - | - | 1 |
| **ಒಟ್ಟು** | 2 | 3 | 1 | 6 |

**ಶೈಕ್ಷಣಿಕ ವಿದ್ಯಾರ್ಹತೆಃ**

1. ಕರ್ನಾಟಕ ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗಾಗಿ ಹೊಂದಿರಬೇಕು.

**ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 81 ಸೇವನೆ 2017, ದಿನಾಂಕ 27.02.2018 ರಲ್ಲಿ ಈ ಕೆಳಕಂಡ ವಿದ್ಯಾರ್ಹತೆ/ ಕೋರ್ಸ್‌ಗಳನ್ನು ಕರ್ನಾಟಕ ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆ/ ಕೋರ್ಸ್‌ಗಳೆಂದು ಸ್ಪಷ್ಟಪಡಿಸಲಾಗಿರುತ್ತದೆ. .**

1) ಸಿ.ಬಿ.ಎಸ್.ಇ ಮತ್ತು ಐ.ಸಿ.ಎಸ್.ಇ ಮಂಡಳಿಯು ನಡೆಸುವ ಕ್ಲಾಸ್ 10 ಪರೀಕ್ಷೆ.
2) ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 10 ಪರೀಕ್ಷೆ.
3) ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (NIOS) ವತಿಯಿಂದ ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್.
4) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್. (ಕೆ.ಓ.ಎಸ್).

**ಟಿಪ್ಪಣಿ** :

a) ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 81 ಸೇವನೆ 2017, ದಿನಾಂಕ 27.02.2018 ರನ್ವಯ ವಿದ್ಯಾರ್ಹತೆಯನ್ನು ಹೊಂದದೆ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರೆ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

b) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗೆ ಎಲ್ಲಾ ಅಭ್ಯರ್ಥಿಗಳು ಅಂಕಪಟ್ಟಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಹೊಂದಿರಬೇಕು.

c) ಎನ್.ಐ.ಓ.ಎಸ್ ಅಥವಾ ಕೆ.ಓ.ಎಸ್ ನಿಂದ ಅಥವಾ ಅದರ ಅಡಿಯಲ್ಲಿ ಗುರುತಿಸಲ್ಪಟ್ಟಿರುವಂತಹ ಸಂಸ್ಥೆಗಳಿಂದ ಶೈಕ್ಷಣಿಕ ಅರ್ಹತಾ ಪ್ರಮಾಣ ಪತ್ರಗಳನ್ನು ಪಡೆದಿದ್ದಲ್ಲಿ, ಅಂತಹ ಸಂಸ್ಥೆಯು ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಬಗ್ಗೆ ಸೂಕ್ತ ದಾಖಲೆಗಳನ್ನು ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು.

2) ಭಾರಿ / ಹಗುರ ವಾಹನ ಚಾಲನಾ ಪರವಾನಗಿಯನ್ನು (Driving Licence – HMV/LMV) ಹೊಂದಿದವರಿಗೆ ಆದ್ಯತೆ ನೀಡಲಾಗುವುದು.

**ಆಯ್ಕೆ ವಿಧಾನಃ**

1. ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ಹಾಗೂ 2021ರ ಅನ್ವಯ ನೇರ ನೇಮಕಾತಿಯನ್ನು ನಡೆಸಲಾಗುವುದು.

2. ಶೈಕ್ಷಣಿಕ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಶೇಕಡವಾರು ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳಂತೆ (1:25ರ ಅನುಪಾತದಲ್ಲಿ ) ಅತೀ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಅಧಿಸೂಚಿಸಿರುವ ಹುದ್ದೆಗಳ ಮೀಸಲಾತಿಗನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಸಂದರ್ಶನವು ಗರಿಷ್ಠ 10 ಅಂಕಗಳನ್ನು ಒಳಗೊಂಡಿರುತ್ತದೆ.

**3.** ಮಹಿಳೆಯರಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಎದುರಾಗಿ ಆ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಆ ರಿಕ್ತ ಸ್ಥಾನಗಳನ್ನು ಅದೇ ನೇರ ಮೀಸಲಾತಿಗೆ ಸೇರಿದ ಪುರುಷ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ವಯೋಮಿತಿ** :- ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ನಿರ್ದಿಷ್ಟ ಪಡಿಸಿರುವಂತೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 262 ಸೇನೆನಿ 2025, ದಿನಾಂಕ 29.01.2026 ರಲ್ಲಿ ಆದೇಶಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆಯನ್ನು ನೀಡಿದ್ದು, ಈ ಹಿನ್ನೆಲೆಯಲ್ಲಿ ಅದನ್ನು ಅಳವಡಿಸಿಕೊಂಡ ನಂತರ ಅಭ್ಯರ್ಥಿಗಳು ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ವರ್ಗ | ಅಭ್ಯರ್ಥಿಗಳ ಗರಿಷ್ಠ ವಯೋಮಿತಿ |
|---|---|
| ಸಾಮಾನ್ಯ ಅಭ್ಯರ್ಥಿಗಳಿಗೆ | 40 ವರ್ಷಗಳು |
| ಪ್ರವರ್ಗ-2(ಎ), 2(ಬಿ), 3(ಎ) ಮತ್ತು 3(ಬಿ) ಅಭ್ಯರ್ಥಿಗಳಿಗೆ | 43 ವರ್ಷಗಳು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-1 ರ ಅಭ್ಯರ್ಥಿಗಳಿಗೆ | 45 ವರ್ಷಗಳು |

ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಟ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| (ಅ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಆ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. |

| | | |
|---|---|---|
| (ಇ) | National Cadet Corps ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಈ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಉ) | ಅಂಗವಿಕಲ/ವಿಕಲಚೇತನ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಊ) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಋ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣಪತ್ರ) | 10 ವರ್ಷಗಳು |
| (ಎ) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದ ಪ್ರಮಾಣಪತ್ರ | 10 ವರ್ಷಗಳು |

## ಅರ್ಜಿ ಸಲ್ಲಿಸುವ ವಿಧಾನ

## ನಿಗದಿತ ಅರ್ಜಿ ಶುಲ್ಕ ಮತ್ತು ಶುಲ್ಕ ಪಾವತಿಸುವ ವಿಧಾನಃ

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ/ವಿಕಲಚೇತನ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ನೀಡಲಾಗಿದೆ |
| ಪ್ರವರ್ಗ-2(ಎ), 2(ಬಿ), 3(ಎ) ಹಾಗೂ 3(ಬಿ) ಅಭ್ಯರ್ಥಿಗಳಿಗೆ | ರೂ.150/- |

| | |
|---|---|
| ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ | ರೂ.300/- |

ನಿಗದಿತ ಅರ್ಜಿ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ SBI E-Pay Payment Portal ಮೂಲಕ ನಿಗದಿತ ಶುಲ್ಕವನ್ನು online payment through net banking / credit card / debit card / UPI ID/QR code ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ನಗದು/ಡಿಮ್ಯಾಂಡ್ ಡ್ರಾಫ್ಟ್ /ಪೋಸ್ಟಲ್ ಆರ್ಡರ್/ಮನಿ ಆರ್ಡರ್/ಚಲನ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಒಮ್ಮೆ ಪಾವತಿ ಮಾಡಿದ ಶುಲ್ಕವನ್ನು ಮರುಪಾವತಿ ಮಾಡಲಾಗುವುದಿಲ್ಲ. ಯಾವುದೇ ಕಾರಣದಿಂದ ಶುಲ್ಕ ಪಾವತಿ ವಿಫಲವಾದಲ್ಲಿ, ಅದಕ್ಕೆ ನೇಮಕಾತಿ ಪ್ರಾಧಿಕಾರವು ಯಾವುದೇ ರೀತಿಯಲ್ಲಿಯೂ ಜವಾಬ್ದಾರರಾಗಿರುವುದಿಲ್ಲ.

## ಅಭ್ಯರ್ಥಿಗಳು Online ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು Online ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2. ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

3. ಅರ್ಹ ಅಭ್ಯರ್ಥಿಗಳಿಗೆ SMS/E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

4. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

   a) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 c.m. ಉದ್ದ x 3.6 c.m. ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

b) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್ ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು ).

c) ಅಭ್ಯರ್ಥಿಯ ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ ( 2.5 c.m. ಉದ್ದ x 7.5 c.m. ಅಗಲವುಳ್ಳದ್ದಾಗಿರಬೇಕು ಮತ್ತು 25 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು ) ಅಪ್ ಲೋಡ್ ಮಾಡಬೇಕು.

5) **ಅಭ್ಯರ್ಥಿಯು, ಅನ್ ಲೈನ್ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಕರ್ನಾಟಕ ಪ್ರೌಢಶಿಕ್ಷಣ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ, ಪರೀಕ್ಷೆಯ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಸ್ಕ್ಯಾನ್ ಮಾಡಿ ಪಿಡಿಎಫ್ ನಮೂನೆಯಲ್ಲಿ ತಪ್ಪದೇ ಅಪ್ಲೋಡ್ ಮಾಡತಕ್ಕದ್ದು ಹಾಗೂ ಅಪ್ಲೋಡ್ ಮಾಡಿದ ಪ್ರತಿಯು ಸ್ಪಷ್ಟವಾಗಿರತಕ್ಕದ್ದು.**

6) **ಅಭ್ಯರ್ಥಿಗಳು ತಮ್ಮ 10 ನೇ ತರಗತಿಯ ಅಂಕಪಟ್ಟಿಯಲ್ಲಿ ಅಂಕಗಳು ಶ್ರೇಣಿಯಲ್ಲಿದ್ದರೆ ಅಥವಾ CGPA ಆಗಿದ್ದರೆ, ಸಂಬಂಧಪಟ್ಟ ಪ್ರಾಧಿಕಾರದಿಂದ ಅಂಕಗಳಾಗಿ ಪರಿವರ್ತಿಸಿದ ಅಂಕಪಟ್ಟಿಯನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆಯೇ ಪಡೆದು, ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗದಿತ ಕಾಲಂನಲ್ಲಿ ನಮೂದಿಸಬೇಕು.**

7) ಅಭ್ಯರ್ಥಿಯು Online ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್ ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಇರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

8) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು ಹಾಗೂ ನಿಗದಿತ ಅರ್ಜಿ ಶುಲ್ಕವನ್ನು ಜಾಗರೂಕತೆಯಿಂದ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ತಪ್ಪಾಗಿ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

9) ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

10) ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಹೊಂದಿರತಕ್ಕದ್ದು.

11) ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ತಿದ್ದುಪಡಿಯಾದ ನಿಯಮ 11 ರ ಪ್ರಕಾರ ಅಭ್ಯರ್ಥಿಗಳು ಯಾವುದೇ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ಸಾರ್ವಜನಿಕ ಉದ್ದಿಮೆಗಳಲ್ಲಿ ಉದ್ಯೋಗ ಹೊಂದಿದ್ದರೆ, ಅಂತಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಸೇವಾ ವಿವರಗಳನ್ನು ನಮೂದಿಸತಕ್ಕದ್ದು ಮತ್ತು ಆಯ್ಕೆಗೊಂಡ ಸಂದರ್ಭದಲ್ಲಿ ಅವರು ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆಯಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಒದಗಿಸತಕ್ಕದ್ದು.

12) ಮೀಸಲಾತಿ ಕೋರಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

a) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು "ನಮೂನೆ-ಡಿ".

b) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು "ನಮೂನೆ-ಇ".

c) ಪ್ರವರ್ಗ 2(ಎ), 2(ಬಿ), 3(ಎ), ಮತ್ತು 3(ಬಿ) ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು "ನಮೂನೆ -ಎಫ್" ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಶೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ), ಪ್ರವರ್ಗ-3(ಬಿ) ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.

12) ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ, ಮೊಹರು ಪಡೆದಿರುವ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

13) ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ಕಡ್ಡಾಯವಾಗಿ ನಮೂನೆ-1 ರಲ್ಲೂ ದೃಢೀಕರಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು ಹಾಗೂ ಮೂಲ ದಾಖಲಾತಿಗಳ ಪರಿಶೀಲನೆಯ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

14) ಅಂಗವಿಕಲ/ವಿಕಲಚೇತನ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19.11.2005 ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ ಸಿಆಸುಇ /115 /ಸೇನನಿ/ 2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು . ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

15) ಯೋಜನೆಗಳಿಂದ ನಿರ್ವಸಿತರಾದ ಅಭ್ಯರ್ಥಿಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರವು ನಿಗದಿಪಡಿಸಿದ ಚಾಲ್ತಿಯಲ್ಲಿರುವ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

16) ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳೊಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳಿಂದ ಹಾಗೂ ಕೊನೆಯದಾಗಿ ವ್ಯಾಸಂಗ ಮಾಡಿದ ಶೈಕ್ಷಣಿಕ ಸಂಸ್ಥೆಯಿಂದ ನಡತೆ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು .

17) ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ.

18) ನೇಮಕಾತಿ ಹೊಂದಿದ ಅಭ್ಯರ್ಥಿಗಳು ಹೊಸ ಪಿಂಚಣಿ ಯೋಜನೆಯ (NPS) ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.

19) ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ .

20) ಕಾಲಕಾಲಕ್ಕೆ ಸರ್ಕಾರ ಹೊರಡಿಸುವ ಆದೇಶಗಳನ್ವಯ ಈ ಅಧಿಸೂಚನೆಯ ಹುದ್ದೆವಾರು ಹಾಗೂ ಪ್ರವರ್ಗವಾರು ವಿವರಗಳು ಪರಿಷ್ಕರಣೆಗೆ ಒಳಪಟ್ಟಿರುತ್ತದೆ.

21) ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ತಾವು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಅಗತ್ಯ ಮೂಲದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಸಮಯದಲ್ಲಿ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಅಥವಾ ಅವರ ಶೈಕ್ಷಣಿಕ ದಾಖಲೆಗಳು/ಮೀಸಲಾತಿಗೆ ಸಂಬಂಧಿಸಿದ ಪ್ರಮಾಣಪತ್ರಗಳು ಸುಳ್ಳು ಅಥವಾ ನಕಲಿ ಎಂದು ಕಂಡು ಬಂದಲ್ಲಿ ಅವರ ಅಭ್ಯರ್ಥಿತನವನ್ನು/ಆಯ್ಕೆಯನ್ನು ರದ್ದುಗೊಳಿಸಲಾಗುವುದು ಹಾಗೂ ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಅವರು ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಗಬೇಕಾಗುತ್ತದೆ.

22) ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

23) ವಿಶೇಷ ಸೂಚನೆಃ ಈ ಅಧಿಸೂಚನೆಗೆ ಸಂಬಂಧಿಸಿದಂತೆ ಹೊರಡಿಸಲಾಗುವ ನೇಮಕಾತಿ ಆದೇಶವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ W.P.No.200448/2025, 17968/2025 ಹಾಗು 3145/2023 ರ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.

ಸಹಿ/xxx

ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ,
ಕೊಡಗು-ಮಡಿಕೇರಿ.

**ಪ್ರತಿಯನ್ನುಃ-**

ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.

**ಪ್ರತಿಯನ್ನು ಮಾಹಿತಿಗಾಗಿ:-**

1. ರಾಜ್ಯದ ಎಲ್ಲಾ ಜಿಲ್ಲೆಗಳ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ ತಮ್ಮ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿ.
2. ಕೊಡಗು ಜಿಲ್ಲಾ ಘಟಕದ ಎಲ್ಲಾ ಅಧೀನ ನ್ಯಾಯಾಲಯಗಳ ಸೂಚನಾ ಫಲಕಗಳಲ್ಲಿ ಪ್ರಕಟಣೆಗಾಗಿ
3. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ರಾಜ್ಯದ ಎರಡು ಪ್ರಮುಖ ದಿನ ಪತ್ರಿಕೆಗಳಲ್ಲಿ ಪ್ರಕಟಣೆಗಾಗಿ.
4. ಆಯುಕ್ತರು, ವಾರ್ತಾ ಇಲಾಖೆ, ನಂ.17, ಭಗವಾನ್ ಮಹಾವೀರ ಜೈನ್, (ಇನ್‌ಫೆಂಟ್ರಿ) ರಸ್ತೆ, ಬೆಂಗಳೂರು – 560 001 – ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ (ದ್ವಿಪ್ರತಿಯಲ್ಲಿ).
5. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಕೊಡಗು-ಮಡಿಕೇರಿ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.